Govt. of Karnataka [C.R.P. 67

Deposition Sheets (R.P. No. 57) Form No. 4

**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಮಧುಗಿರಿ ,**

ಪ್ರಕರಣ ಸಂಖ್ಯೆಃ **2531/2022**

ದಿನಾಂಕಃ **30-01-2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

| ಸಿಡಬ್ಲ್ಯೂಃ | 4 | ಪಿಡಬ್ಲ್ಯೂ | 4 |
|---|---|---|---|
| ಹೆಸರು | ಸಿದ್ದಪ್ಪ | | |
| ತಂದೆ / ಗಂಡನ ಹೆಸರು | ವದ್ದಣ್ಣ | | |
| ವಯಸ್ಸು | 43 | | |
| ಉದ್ಯೋಗ | ವ್ಯವಸಾಯ | | |
| ವಾಸ | ಲಕ್ಕಿಹಟ್ಟಿ ಗ್ರಾಮ | | |

ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದಃ

ಸಾಕ್ಷಿಯು ಸ್ಥಳ ಪಂಚನಾಮೆಯನ್ನು ನೋಡಿ ತನ್ನ ಸಹಿಯನ್ನು ಗುರುತಿಸಿದ್ದು , ಸ್ಥಳ ಪಂಚನಾವೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 2 ವರ್ಷಗಳ ಹಿಂದೆ ನಾನು ಮಿಡಿಗೇಶಿ ಬಸ್ ನಿಲ್ದಾಣದ ಹತ್ತಿರ ಇದ್ದಾಗ ಪೋಲಿಸರ ಹೇಳಿಕೆ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಏನು ಬರವಣಿಯಾಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಸದರಿ ದಾಖಲೆಗೆ ಯಾರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಎಪಿಪಿ ರವರು ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎ ಪಿ ಪಿ ರವರಿಂದಃ

ದಿಃ 14-10-2022 ರಂದು ಚಾಸಾ 2 ರವರು ತೋರಿಸಿದ ಅಪಘಾತದ ಸ್ಥಳದಲ್ಲಿ ಪೋಲಿಸರು ನನ್ನ ಮತ್ತು 5 ರವರ ಸಮಕ್ಷಮ ಸಂಜೆ 5.30 ರಿಂದ 6.30 ರವರೆಗೆ ಸ್ಥಳ ಪಂಚನಾಮೆಯನ್ನು ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ಪೋಲಿಸರು ನಿಪಿ-3 ರಂತೆ ನನ್ನ ಸಮಕ್ಷಮ ಸ್ಥಳ ಪಂಚನಾಮೆ ಮಾಡಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಃ ಇಲ್ಲ**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಮ್.ಎಫ್.ಸಿ. ಮಧುಗಿರಿ